# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 105
2. ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 04.03.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯದಲ್ಲಿ ಇರುವ ವಿಮಾನ ನಿಲ್ದಾಣಗಳಲ್ಲಿ ದೇಶೀಯ ಮತ್ತು ಅಂತರಾಷ್ಟ್ರೀಯ ನಾಗರೀಕ ಮತ್ತು ಸರಕು ವಿಮಾನಗಳ ಸಂಚಾರ ಮಾಡಲು ಬೇಕಾಗುವ ಮೂಲ ಸೌಕರ್ಯಗಳು ಇವೆಯೇ; ಇದ್ದಲ್ಲಿ ಯಾವ ಯಾವ ವಿಮಾನ ನಿಲ್ದಾಣಗಳಲ್ಲಿ ಈ ಸೌಲಭ್ಯಗಳಿವೆ: | ಕರ್ನಾಟಕ ರಾಜ್ಯದಲ್ಲಿನ ಈ ಕೆಳಕಂಡ ವಿಮಾನ ನಿಲ್ದಾಣಗಳು ನಾಗರೀಕ ಮತ್ತು ಸರಕು ವಿಮಾನಗಳ ಸಂಚಾರ ಮಾಡಲು ಅಗತ್ಯವಿರುವ ಮೂಲಸೌಲಭ್ಯಗಳನ್ನು ಹೊಂದಿವೆ.<br>1. ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು<br>2. ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ<br>3. ಹುಬ್ಬಳ್ಳಿ ವಿಮಾನ ನಿಲ್ದಾಣ<br>4. ಬೆಳಗಾವಿ ವಿಮಾನ ನಿಲ್ದಾಣ |
| (ಆ) | ಈಗಾಗಲೇ ಇರುವ ವಿಮಾನ ನಿಲ್ದಾಣಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣ ಮೂಲ ಸೌಕರ್ಯಗಳನ್ನು ಒದಗಿಸಲು ಸರಕಾರ ಕೈಗೊಂಡ ಕ್ರಮಗಳೇನು: | ಪ್ರಸ್ತುತ ರಾಜ್ಯದಲ್ಲಿ, ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು, ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಿಗೆ ಅಂತರಾಷ್ಟ್ರೀಯ ಮಟ್ಟದ ಮೂಲಸೌಕರ್ಯಗಳನ್ನು ಒದಗಿಸಲಾಗಿದೆ. |
| (ಇ) | ರಾಜ್ಯದ ಕರಾವಳಿ ಜಿಲ್ಲೆಗಳಿಂದ ಅತೀ ಹೆಚ್ಚು ನಾಗರೀಕರು ವಿದೇಶಗಳಿಗೆ ಉದ್ಯೋಗ ವ್ಯವಹಾರಗಳಿಗೆ ವಿಮಾನ ಮೂಲಕ ಪ್ರಯಾಣಿಸುತ್ತಿದ್ದು ಅನೇಕ ಸಂದರ್ಭಗಳಲ್ಲಿ ರಾಜ್ಯದ ಬೆರಳೆಣಿಕೆಯ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣಗಳಲ್ಲಿ ಇಳಿದು ಇನ್ನೊಂದು ವಿಮಾನದ ಮೂಲಕ ಕರಾವಳಿ ಜಿಲ್ಲೆಗಳಿಗೆ ಪ್ರಯಾಣಿಸಬೇಕಾದ ಅನೀವಾರ್ಯತೆ ಸೃಷ್ಟಿಯಾಗಿರುವ ಸಮಸ್ಯೆಯನ್ನು ಪರಿಹರಿಸಲು ಇಲಾಖೆ ಯಾವ ಕ್ರಮ ವಹಿಸುತ್ತಿದೆ: | ಕರಾವಳಿ ಜಿಲ್ಲೆಗಳ ನಾಗರೀಕರ ವಿದೇಶ ಪ್ರಯಾಣದ ಅನುಕೂಲಕ್ಕಾಗಿ ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ಕಾರ್ಯನಿರ್ವಹಿಸುತ್ತಿದೆ.<br><br>ಮುಂದುವರೆದು, ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ಸಿವಿಲ್ ಎನ್‌ಕ್ಲೇವ್ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಒಟ್ಟು 97.04 ಎಕರೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೇಂದ್ರ ರಕ್ಷಣಾ ಮಂತ್ರಾಲಯದ(MoD) ಸಹಯೋಗದೊಂದಿಗೆ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. |

...2

| | | |
|---|---|---|
| (ಈ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ವಿಮಾನ ನಿಲ್ದಾಣ (Tabletop runway) ಟೇಬಲ್ ಟೋಪ್ ಮಾದರಿಯ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣವಾಗಿದ್ದು ಹಲವು ವಿದೇಶಿ ವಿಮಾನಗಳು ಸಂಚರಿಸುತ್ತಿಲ್ಲವಾದ್ದರಿಂದ ಕರಾವಳಿಯ ಮಂಗಳೂರು ಮತ್ತು ಉಡುಪಿ ನಡುವೆ ಹೊಸ ವಿಮಾನ ನಿಲ್ದಾಣ ಪ್ರಾರಂಭಿಸುವ ಪ್ರಸ್ತಾವನೆ ಸರಕಾರದ ಮುಂದಿದೆಯೇ? (ವಿವರ ನೀಡುವುದು) | ಮಂಗಳೂರು ಮತ್ತು ಉಡುಪಿ ನಡುವೆ ಹೊಸ ವಿಮಾನ ನಿಲ್ದಾಣ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಮೂಅಇ 34 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು